## ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 150**

**ಮಾನ್ಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ**

**ಉತ್ತರಿಸಬೇಕಾದ ದಿನಾಂಕ : 01.02.2021**

**ಉತ್ತರಿಸಬೇಕಾದ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | 2017-18 ರಿಂದ 2019-20ನೇ ಸಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಎನ್.ಹೆಚ್.ಎಂ ಯೋಜನೆಯಡಿಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಈ ಯೋಜನೆಯಡಿಯಲ್ಲಿ ಎಷ್ಟು ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗಿದೆ; (ಅಧಿಸೂಚನೆಯ ಪ್ರತಿಯೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು) | 2017-18 ರಿಂದ 2019-20ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಎನ್.ಹೆಚ್.ಎಂ ಯೋಜನೆಯಡಿಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ-244. ಈ ಪೈಕಿ ಪತ್ರಿಕಾ ಪ್ರಕಟಣೆ ನೀಡಿ ನೇಮಕ ಮಾಡಿಕೊಳ್ಳಲಾದ ಹುದ್ದೆಗಳ ಸಂಖ್ಯೆ:242. |
| ಆ) | 2017-18 ಇಂದ 2019-20ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ 'ಡಿ' ಗ್ರೂಪ್ ನೌಕರರ ನೇಮಕಾತಿ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಯಾವ ನಿಯಮದ ಪ್ರಕಾರ ಮತ್ತು ಯಾವ ಆಧಾರರದ ಮೇಲೆ ಯಾರ ಅಧ್ಯಕ್ಷತೆಯಲ್ಲಿ ನೇಮಕಾತಿ ಮಾಡಲಾಗಿದೆ; ಆ ನೇಮಕಾತಿಗೆ ಪತ್ರಿಕಾ ಪ್ರಕರಟಣೆ ಹೊರಡಿಸಲಾಗಿದೆಯೇ; ಹೊರಡಿಸಿದ್ದಲ್ಲಿ, ಅದರ ಸಂಪೂರ್ಣವಾದ ಮಾಹಿತಿ ಒದಗಿಸುವುದು; | 2017-18 ರಿಂದ 2019-20ನೇ ಸಾಲಿನಲ್ಲಿ ಎನ್.ಎಚ್.ಎಂ. ಯೋಜನೆಯಡಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ 04 ಗ್ರೂಪ್-"ಡಿ" ನೌಕರರನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಅಧೀನದ ಸಂಸ್ಥೆಯಾದ ಬೀದರ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿದೋದ್ದೇಶ ಸಹಕಾರ ಸಂಘ, ಬೀದರ ಇವರಿಂದ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲಾಗಿದೆ. |
| ಇ) | ನಗರದಲ್ಲಿ ನಿಯಮಾನುಸಾರ ವಿಶೇಷ ನೇಮಕಾತಿ ಸಮಿತಿ ಮೂಲಕ ಅಧಿಸೂಚನೆ ಹೊರಡಿಸಿ ಸದರಿ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ ನೇಮಕಾತಿ ಮಾಡಲಾಗಿದೆಯೇ? (ಮೆರಿಟ್ ಲಿಸ್ಟನ ಸಂಪೂರ್ಣವಾದ ಮಾಹಿತಿ ನೀಡುವುದು) | ಬೀದರ್ ನಗರದಲ್ಲಿ ವಿಶೇಷ ನೇಮಕಾತಿ ಸಮಿತಿ ಮೂಲಕ ಯಾವುದೇ ಅಧಿಸೂಚನೆ ಹೊರಡಿಸಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಕರೆದಿರುವುದಿಲ್ಲ. |

**ಸಂಖ್ಯೆ: ಆಕುಕ 07 ಎಸ್.ಟಿ.ಕ್ಯೂ 2021**

**(ಡಾ|| ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು